All India Radio: Bangalore
Regional Bulletin In Kannada
21.09.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

## ಮುಖ್ಯಾಂಶಗಳು

- ಸರಕು ಮತ್ತು ಸೇವಾ ತೆರಿಗೆ - ಜಿಎಸ್‌ಟಿ ಸುಧಾರಣೆ ನಾಳೆಯಿಂದ ಜಾರಿ ; ಉಳಿತಾಯ ಉತ್ಸವದಲ್ಲಿ ಸ್ವದೇಶಿ ಉತ್ಪನ್ನ ಖರೀದಿಸಲು ಪ್ರಧಾನಿ ಮನವಿ
- ರಾಜ್ಯದಲ್ಲಿ ನಾಳೆಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲು ಎಲ್ಲ ಸಿದ್ಧತೆ - ಹಿಂದುಳಿದ ಆಯೋಗದ ಅಧ್ಯಕ್ಷ ಮಧುಸೂದನ್ ನಾಯಕ್
- ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ನಾಳೆ ಆರಂಭ ; ರಾಜ್ಯದ ಶಕ್ತಿ ದೇಗುಲಗಳಲ್ಲಿ ನವರಾತ್ರಿ ಉತ್ಸವದ ಸಂಭ್ರಮ
- ಸಾಮಾಜಿಕ ಮಾಧ್ಯಮದ ವ್ಯಸನ ; ಯುವ ಪೀಳಿಗೆಯಲ್ಲಿ ಹೃದಯ ಕಾಯಿಲೆಗೆಳಿಗೆ ಕಾರಣ - ಸಂಸದ, ಹೃದ್ರೋಗ ತಜ್ಞ ಡಾ. ಸಿ.ಎನ್. ಮಂಜುನಾಥ್

************

ಸರಕು ಮತ್ತು ಸೇವಾ ತೆರಿಗೆ ಸುಧಾರಣೆಗಳು ನವರಾತ್ರಿಯ ಮೊದಲ ದಿನವಾದ ನಾಳೆಯಿಂದ ಜಾರಿಗೆ ಬರಲಿದ್ದು, ಈ ಉಳಿತಾಯ ಉತ್ಸವದಲ್ಲಿ ಜನರು ಕಡಿಮೆ ಬೆಲೆಗೆ ತಮಗೆ ಬೇಕಾದ ಸರಕುಗಳನ್ನು ಕೊಳ್ಳಬಹುದಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ದೇಶವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಹೊಸ ತಲೆಮಾರಿನ ಸುಧಾರಣೆಗಳು ಯುವಜನತೆ, ಮಧ್ಯಮವರ್ಗ, ಮಹಿಳೆಯರು, ರೈತರು ಹಾಗೂ ಉದ್ದಿಮೆಗಳಿಗೆ ಪ್ರಯೋಜನ ಒದಗಿಸಲಿದೆ ಎಂದು ಹೇಳಿದರು. ಕಳೆದ ೧೨ ವರ್ಷಗಳಲ್ಲಿ ೨೫ ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ. ಸರ್ಕಾರ ಜಾರಿಗೆ ತಂದ ಜಿಎಸ್‌ಟಿ ಸುಧಾರಣೆ ಅನೇಕ ತೆರಿಗೆ ಹೊರೆಯನ್ನು ಕಡಿಮೆ ಮಾಡಿದೆ. ನಾಳೆಯಿಂದ ಜಾರಿಗೆ ಬರುವ ಮುಂದಿನ ತಲೆಮಾರಿನ ತೆರಿಗೆ ಸುಧಾರಣೆಯಿಂದ ಜನಸಾಮಾನ್ಯರು ಬಳಸುವ ದಿನಬಳಕೆಯ ವಸ್ತುಗಳ ಬೆಲೆ ಕಡಿಮೆಯಾಗಲಿದೆ. ಅನೇಕ ವಸ್ತುಗಳು ಶೂನ್ಯ ತೆರಿಗೆ ವ್ಯಾಪ್ತಿಗೆ ಬರುತ್ತಿವೆ. ಶೇಕಡ ೯೯ರಷ್ಟು ಸರಕು, ಶೇಕಡ ೫ ಜಿಎಸ್‌ಟಿ ಪಟ್ಟಿಯಲ್ಲಿವೆ. ವೈಯಕ್ತಿಕ ಆದಾಯ ಕರದಲ್ಲಿ ೧೨ ಲಕ್ಷ ರೂಪಾಯಿವರೆಗಿನ ಆದಾಯಕ್ಕೆ ತೆರಿಗೆ ವಿನಾಯಿತಿ ಘೋಷಿಸಲಾಗಿದೆ. ಇದರಿಂದ ಮನೆ ನಿರ್ಮಾಣ, ಟಿ.ವಿ., ಸ್ಕೂಟರ್, ಬೈಕ್ ಖರೀದಿ ಕನಸು ನನಸಾಗಲಿದೆ ಎಂದು ಹೇಳಿದರು. ಹೊಟೇಲ್ ಕೊಠಡಿ ದರಗಳು ಕೂಡ ಕಡಿಮೆಯಾಗಲಿದ್ದು, ಜನರ ತಿರುಗಾಟ ಹಾಗೂ ಪ್ರವಾಸಕ್ಕೆ ಅನುಕೂಲವಾಗಲಿದೆ. ಜಿಎಸ್‌ಟಿ ಸುಧಾರಣೆಯ ಲಾಭವನ್ನು ಜನರಿಗೆ ಹಸ್ತಾಂತರಿಸಲು ವ್ಯಾಪರಸ್ಥರು ಉತ್ಸುಕರಾಗಿದ್ದಾರೆ. ತೆರಿಗೆ ಸುಧಾರಣೆ ನಾಗರಿಕ ದೇವೋಭವ ಮಂತ್ರದೊಂದಿಗೆ ಸಾಗುತ್ತಿದೆ. ಜಿಎಸ್‌ಟಿ ದರ ಕಡಿಮೆಯಾಗುವ ಮೂಲಕ ಪ್ರಕ್ರಿಯೆ ಕೂಡ ಸರಾಗಗೊಂಡಿದ್ದು, ಇದು ಅತಿಸಣ್ಣ, ಸಣ್ಣ ಹಾಗೂ ಮಧ್ಯಮ ಗಾತ್ರದ

ಉದ್ಯಮಗಳಿಗೆ ನೆರವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಜನರು ದೇಶದಲ್ಲೇ ತಯಾರಾದ ಮೇಡ್ ಇನ್ ಇಂಡಿಯಾ ಉತ್ಪನ್ನಗಳನ್ನು ಖರೀದಿಸಬೇಕು. ಪ್ರತಿಮನೆ ಸ್ವದೇಶಿ ಉತ್ಪನ್ನಗಳಿಂದ ಅಲಂಕೃತಗೊಳ್ಳಬೇಕು. ಈ ಬಗ್ಗೆ ಭಾರತೀಯರು ಹೆಮ್ಮೆ ಪಡಬೇಕು ಎಂದು ಪ್ರಧಾನಮಂತ್ರಿ ಹೇಳಿದರು. ಆತ್ಮ ನಿರ್ಭರ ಭಾರತ ಗುರಿ ಸಾಧನೆಗಾಗಿ ರಾಜ್ಯ ಸರ್ಕಾರಗಳು ಬಂಡವಾಳ ಹೂಡಿಕೆಗೆ ಒತ್ತು ನೀಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು.

************

ರಾಜ್ಯದಲ್ಲಿ ನಾಳೆಯಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲು ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹಿಂದುಳಿದ ಆಯೋಗದ ಅಧ್ಯಕ್ಷ ಮಧುಸೂದನ್ ನಾಯಕ್ ತಿಳಿಸಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈಗಾಗಲೇ ೨ ಕೋಟಿ ಮನೆಗಳ ಪಟ್ಟಿ ತಯಾರಿಸುವ ಜಿಯೋ ಟ್ಯಾಗಿಂಗ್ ಮತ್ತು ಗಣತಿ ಬ್ಲಾಕಿನ ನಕ್ಷೆ ಮಾಡುವ ಕಾರ್ಯವನ್ನು ಪೂರ್ತಿಗೊಳಿಸಲಾಗಿದೆ. ಬ್ಲಾಕ್ ನಕ್ಷೆಗಳಲ್ಲಿ ಮನೆಗಳನ್ನು ಗುರುತಿಸುವುದಲ್ಲದೇ ರಸ್ತೆಗಳನ್ನು ನಕ್ಷೆಗಳಲ್ಲಿ ನಮೂದಿಸಲಾಗಿದೆ. ಗಣತಿದಾರರು ಸಮೀಕ್ಷೆ ಮಾಡಬೇಕಾದ ಮನೆಯನ್ನು ತಲುಪಲು ಅನುಕೂಲವಾಗುವಂತೆ ಮಾಡಲಾಗಿದೆ ಎಂದು ಅವರು ತಿಳಿಸಿದರು. ಸುಮಾರು ೨ ಲಕ್ಷ ಶಿಕ್ಷಕರು ಹಾಗೂ ಇತರೆ ಸಿಬ್ಬಂದಿ, ಸಮೀಕ್ಷೆ ಹಾಗೂ ಸಂಬಂಧಿತ ಕೆಲಸಗಳಲ್ಲಿ ತೊಡಗಲಿದ್ದು, ಇಲಾಖಾ ಅಧಿಕಾರಿಗಳು ಮೇಲುಸ್ತುವಾರಿ ಮಾಡಲಿದ್ದಾರೆ. ಒಬ್ಬ ಸಮೀಕ್ಷಕರಿಗೆ ಸುಮಾರು ೧೪೦ ರಿಂದ ೧೫೦ ಮನೆಗಳ ಸಮೀಕ್ಷಾ ಕಾರ್ಯ ವಹಿಸಿಕೊಡಲಾಗಿದೆ. ಒಬ್ಬ ಸಮೀಕ್ಷಕರು ದಿನಕ್ಕೆ ೭ ರಿಂದ ೮ ಮನೆಗಳನ್ನು ಸಮೀಕ್ಷೆ ಮಾಡಿದಲ್ಲಿ ೨ ಕೋಟಿ ಕುಟುಂಬಗಳ ಮಾಹಿತಿಯನ್ನು ೧೬ ದಿನಗಳಲ್ಲಿ ಮೊಬೈಲ್ ಆಪ್‌ನಲ್ಲಿ ಸಂಗ್ರಹಿಸಬಹುದಾಗಿದೆ ಎಂದು ಅವರು ತಿಳಿಸಿದರು. ಸಮೀಕ್ಷಾ ನಮೂನೆಯಲ್ಲಿ ಒಟ್ಟು ೬೦ ಕಾಲಂಗಳು ಇದ್ದು, ನಾಗರಿಕರು ಒಂದಕ್ಕಿಂತ ಹೆಚ್ಚು ಬಾರಿ ಸಮೀಕ್ಷೆಗೆ ಒಳಪಡುವುದನ್ನು ತಪ್ಪಿಸಲು ಆಧಾರ್ ಸಂಖ್ಯೆ ನೀಡುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಮಧುಸೂದನ್ ಹೇಳಿದರು. ಹಿಂದಿನ ವರ್ಷಗಳಲ್ಲಿ ಅಸ್ತಿತ್ವದಲ್ಲಿವೆ ಎಂದು ಹೇಳಲಾದ ಜಾತಿಗಳನ್ನು ಸಮೀಕ್ಷಾಗಾರರ ಅನುಕೂಲಕ್ಕಾಗಿ ಮೊಬೈಲ್ ಆಪ್‌ನ ಡ್ರಾಪ್‌ಡೌನ್‌ನಲ್ಲಿ ಪಟ್ಟಿ ಮಾಡಿ ಒದಗಿಸಲಾಗಿದೆ. ಇದು ಸಮೀಕ್ಷಾದಾರರ ಆಂತರಿಕ ಬಳಕೆಗೆ ಮಾತ್ರ ; ಸಾರ್ವಜನಿಕ ದಾಖಲೆ ಅಲ್ಲ. ಇದನ್ನು ಬೇರೆ ಉದ್ದೇಶಕ್ಕೆ ಬಳಸಲು ಸಾಧ್ಯವಿರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

************

ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ ಚರಿತ್ರೆ ಆಧರಿತ 'ಚಲೋ ಜೀತೆ ಹೈ' ಕಿರು ಚಿತ್ರ ಮಣಿಪಾಲ್ ಸೆಂಟ್ರಲ್ ಸಿನಿಮಾಸ್ ಚಿತ್ರಮಂದಿರದಲ್ಲಿ ಸೆಪ್ಟಂಬರ್ ೧೮ ರಿಂದ ಯಶಸ್ವೀ ಪ್ರದರ್ಶನ ಕಾಣುತ್ತಿದೆ. ಪ್ರತಿದಿನ ಸಂಜೆ ೬.೩೦ ಕ್ಕೆ ಸಿನಿಮಾ ಸ್ಕ್ರೀನಿಂಗ್ ಇದ್ದು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಿನಿಮಾ ವೀಕ್ಷಿಸಿತ್ತಿದ್ದಾರೆ. ಇನ್ನು ಸಿನಿಮಾವು ಪ್ರಸ್ತುತ ೩೦ ನಿಮಿಷದ ಕಿರು ಚಿತ್ರವಾಗಿದ್ದು, ಇನ್ನೂ ಹೆಚ್ಚಿನ ಕಾಲಾವಕಾಶದ ಸಿನಿಮಾವಾಗ ಬೇಕಿತ್ತು ಎಂದು ಅಭಿಮಾನಿಗಳು

ಆಶಯ ವ್ಯಕ್ತಪಡಿಸಿದ್ದಾರೆ. ಕಿರುಚಿತ್ರದ ಪ್ರದರ್ಶನದ ನಾಲ್ಕನೇ ದಿನವೂ ಸಹ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ ಪ್ರೇಕ್ಷಕ ಶ್ರೀಧರ್ ಇದು ಮಕ್ಕಳು ಕಡ್ಡಾಯವಾಗಿ ನೋಡಬೇಕಾದ ಸಿನಿಮಾ. ಇದರಲ್ಲಿ ಮೋದಿ ಅವರ ಬಾಲ್ಯ ಚೆನ್ನಾಗಿ ತೋರಿಸಿದ್ದಾರೆ ಎಂದು ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಶ್ರೀಧರ್ (೨೦ ಸೆಕೆಂಡ್‌ಗಳು)

************

ರಾಜ್ಯದಲ್ಲಿ ಮಾಹಿತಿ ಹಕ್ಕು ಅಧಿನಿಯಮದಂತೆ ವಾರ್ಷಿಕ ಸರಾಸರಿ ನಾಲ್ಕೂವರೆ ಲಕ್ಷ ಅರ್ಜಿ ಸ್ವೀಕೃತವಾಗುತ್ತವೆ ಎಂದು ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಮುಖ್ಯ ಮಾಹಿತಿ ಆಯುಕ್ತ ಆಶಿತ್ ಮೋಹನ್ ಪ್ರಸಾದ್ ತಿಳಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇದರಲ್ಲಿ ೨೫ ಸಾವಿರ ಅರ್ಜಿಗಳು ಎರಡನೇ ಮೇಲ್ಮನವಿ ಆಯೋಗಕ್ಕೆ ಬರುತ್ತವೆ. ಸ್ವಯಂ ಸೇವಾ ಸಂಸ್ಥೆಯ ಮೂಲಕ ಮಾಹಿತಿ ಹಕ್ಕು ಅಧಿನಿಯಮದ ಉಪಯುಕ್ತತೆಯ ಬಗ್ಗೆ ಸಮೀಕ್ಷೆ ನಡೆಸಲಾಗಿದ್ದು, ೪೫ ರಿಂದ ೫೦ ಪ್ರತಿಶತ ಜನಗಳಿಗೆ ಉಪಯುಕ್ತವಾಗಿದೆ ಎಂಬುದು ಕಂಡು ಬಂದಿದೆ ಎಂದು ಹೇಳಿದರು. ಮಾಹಿತಿ ಅಧಿನಿಯಮ ಜಾರಿಗೆ ಅಕ್ಟೋಬರ್ ೧೨ ರಂದು ೨೦ ವರ್ಷಗಳು ತುಂಬಿರುವ ಹಿನ್ನಲೆಯಲ್ಲಿ ಮಾಹಿತಿ ಹಕ್ಕು ಆಯೋಗವು ರಾಜ್ಯಮಟ್ಟದಲ್ಲಿ ಮಾಹಿತಿ ಹಕ್ಕು ಅಧಿನಿಯಮ ಪರಿಣಾಮಾಕಾರಿ ಅನುಷ್ಠಾನದ ಬಗ್ಗೆ ಕಾರ್ಯಕ್ರಮ ಆಯೋಜಿಸುತ್ತಿದೆ ಎಂದು ಆಶಿತ್ ಮೋಹನ್ ಪ್ರಸಾದ್ ತಿಳಿಸಿದರು.

************

ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ನಾಳೆ ಆರಂಭವಾಗಲಿದೆ. ನಾಳೆ ಬೆಳಗ್ಗೆ ಸುಮಾರು ೧೦ ಗಂಟೆ ವೇಳೆಗೆ ಚಾಮುಂಡಿ ಬೆಟ್ಟದಲ್ಲಿ ನಾಡ ದೇವತೆ ಶ್ರೀ ಚಾಮುಂಡೇಶ್ವರ ದೇವಿಯ ಅಗ್ರ ಪೂಜೆಯೊಂದಿಗೆ ದಸರಾ ಮಹೋತ್ಸವ ಉದ್ಘಾಟನೆಗೊಳ್ಳಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉಪಸ್ಥಿತಿಯಲ್ಲಿ ಬುಕರ್ ಪ್ರಶಸ್ತಿ ವಿಜೇತ ಹಿರಿಯ ಸಾಹಿತಿ ಭಾನು ಮುಷ್ತಾಕ್, ದಸರಾ ಮಹೋತ್ಸವ ಉದ್ಘಾಟಿಸುವ ಕಾರ್ಯಕ್ರಮವಿದೆ. ಸಂಜೆ ಅರಮನೆಯ ಆವರಣದಲ್ಲಿ ಮುಖ್ಯಮಂತ್ರಿಯವರು ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ನಾಳೆಯಿಂದ ಅಕ್ಟೋಬರ್ ೨ರವರೆಗೆ ೧೧ ದಿನಗಳ ಕಾಲ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಸಂಗೀತ ಕಾರ್ಯಕ್ರಮ, ಫಲಪುಷ್ಪ ಪ್ರದರ್ಶನ, ಆಹಾರ ಮೇಳ, ಕುಸ್ತಿ ಪಂದ್ಯಾವಳಿ, ಚಿತ್ರಕಲಾ ಶಿಬಿರ, ಪುಸ್ತಕಮೇಳ, ಕರಕುಶಲ ವಸ್ತುಪ್ರದರ್ಶನ, ರಂಗೋಲಿ ಸ್ಪರ್ಧೆ, ಮಹಿಳಾ ದಸರಾ, ಕವಿಗೋಷ್ಠಿ, ರೈತದಸರಾ, ಪಾರಂಪರಿಕ ಸೈಕಲ್ ಸವಾರಿ, ಮೊದಲಾದವುಗಳನ್ನು ಮೈಸೂರಿನಲ್ಲಿ ವ್ಯವಸ್ಥೆ ಮಾಡಲಾಗಿದೆ. ಅಕ್ಟೋಬರ್ ೨ ರಂದು ಅರಮನೆ ಬಲರಾಮ ದ್ವಾರದಲ್ಲಿ ಮಧ್ಯಾಹ್ನ ನಂದಿ ಪೂಜೆ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಂಬಾರಿಯಲ್ಲಿ ಶ್ರೀ ಚಾಮುಂಡೇಶ್ವರಿ ದೇವಿ ಹೊತ್ತ ಗಜಪಡೆ - ಜಂಬೂ ಸವಾರಿ, ವಿಜಯದಶಮಿ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಸಂಜೆ ಬನ್ನಿಮಂಟಪ

ಮೈದಾನದಲ್ಲಿ ನಡೆಯುವ ಪಂಜಿನ ಕವಾಯಿತಿನಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಗೌರವ ವಂದನೆ ಸ್ವೀಕರಿಸಲಿದ್ದಾರೆ. ಜಗತ್ಪ್ರಸಿದ್ಧ ಮೈಸೂರು ಅರಮನೆಯಲ್ಲಿ ಖಾಸಗಿ ದರ್ಬಾರ್‌ಗೆ ಭರದ ಸಿದ್ಧತೆ ನಡೆಸಲಾಗಿದೆ. ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ರತ್ನ ಖಚಿತ ಸಿಂಹಾಸನವೇರಿ ಖಾಸಗಿ ದರ್ಬಾರ್ ನಡೆಸಲಿದ್ದಾರೆ. ನಾಳೆ ವಾಣಿವಿಲಾಸ ದೇವರ ಮನೆಯಲ್ಲಿ ಅವರು ಕಂಕಣಧಾರಣೆ ಮಾಡಲಿದ್ದು, ನಾಡಿದ್ದು, ೨೩ರಿಂದ ೨೯ರವರೆಗೆ ಖಾಸಗಿ ದರ್ಬಾರ್ ಜರುಗಲಿದೆ. ೨೯ರಂದು ಯದುವೀರ್ ಒಡೆಯರ್ ಸರಸ್ವತಿ ಪೂಜೆ ನೆರವೇರಿಸಲಿದ್ದಾರೆ. ನಂತರ, ಕಾಳರಾತ್ರಿ ಪೂಜೆ, ಆಯುಧ ಪೂಜೆಯ ದಿನದಂದು ಚಂಡಿ ಹೋಮ ನಡೆಯಲಿದ್ದು, ಅಕ್ಟೋಬರ್ ೨ರಂದು ವಿಜಯದಶಮಿ ಪೂಜೆ ನಂತರ ವಿಜಯಯಾತ್ರೆ ಆರಂಭವಾಗಲಿದೆ. ಎಲ್ಲಾ ಪೂಜೆ ಮುಗಿದ ಬಳಿಕ ಜಂಬೂಸವಾರಿಗೆ ಚಾಲನೆ ದೊರೆಯಲಿದೆ. ಶರನ್ನವರಾತ್ರಿ ಅಂಗವಾಗಿ ರಾಜ್ಯದ ವಿವಿಧ ಶಕ್ತಿ ದೇಗುಲಗಳಲ್ಲಿ ವಿಶೇಷ ಪೂಜೆ, ಹೋಮ, ಆರಾಧನಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಶೃಂಗೇರಿ, ಹೊರನಾಡು, ಕೊಲ್ಲೂರು, ಶಿರಸಿ, ಬನವಾಸಿ ಸೇರಿದಂತೆ ರಾಜ್ಯಾದ್ಯಂತ ದೇವಿ ಮಂದಿರಗಳಲ್ಲಿ ಪ್ರತಿದಿನ ಅವತಾರ ಅಲಂಕಾರಗಳನ್ನು ವ್ಯವಸ್ಥೆ ಮಾಡಲಾಗಿದೆ.

************

ಸಾಮಾಜಿಕ ಮಾಧ್ಯಮದ ವ್ಯಸನವು ಯುವ ಪೀಳಿಗೆಯಲ್ಲಿ ಹೃದಯ ಕಾಯಿಲೆಗಳಿಗೆ ಕಾರಣವಾಗುತ್ತಿದೆ ಎಂದು ಲೋಕಸಭಾ ಸದಸ್ಯ ಹಾಗೂ ಹಿರಿಯ ಹೃದ್ರೋಗ ತಜ್ಞ ಡಾ. ಸಿ.ಎನ್. ಮಂಜುನಾಥ್ ಹೇಳಿದ್ದಾರೆ. ಅವರು, ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟ ಕೊಡ ಮಾಡಿದ ಸರ್. ಎಂ. ವಿಶ್ವೇಶ್ವರಯ್ಯ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು. ವಾಟ್ಸ್ಆಪ್, ಇನ್‌ಸ್ಟಾಗ್ರಾಂ, ಟ್ವಿಟರ್, ಫೇಸ್‌ಬುಕ್ ಮತ್ತು ಯೂಟ್ಯೂಬ್‌ಗಳ ವ್ಯಸನ ಯುವ ಪೀಳಿಗೆಯಲ್ಲಿ ತೀವ್ರ ಜೀವನಶೈಲಿಯ ಬದಲಾವಣೆ ತಂದಿವೆ. ಇದು ವ್ಯಸನ, ಒಂಟಿತನ, ಖಿನ್ನತೆ ಮತ್ತು ಹೃದಯ ಸಂಬಂಧಿತ ಕಾಯಿಲೆಗಳಿಗೆ ಕಾರಣವಾಗಿದೆ ಎಂದು ಹೇಳಿದರು.

************